4) ಪ್ರತಿಯನ್ನು ಎಲ್ಲಾ ಕಾರ್ಯಪಾಲಕ ಅಭಿಯಂತರರು, ಪಂ.ರಾ.ಇಂ. ವಿಭಾಗ ಇವರುಗಳಿಗೆ ಮಾಹಿತಿಗಾಗಿ ಕಳುಹಿಸುತ್ತಾ ಮೇಲ್ಕಂಡ ವಿಷಯದ ಕುರಿತು ಕ್ರಮವಹಿಸಿ ಅನುಪಾಲನಾ ವರದಿ ಸಲ್ಲಿಸಲು ಸೂಚಿಸಿದೆ.

5) ಕಡತಕ್ಕೆ

ಹೊಸದಾಗಿ ಮಹಿಳಾ ವಿಶ್ವವಿದ್ಯಾಲಯ ಸ್ಥಾಪನೆ

2564(972); ಶ್ರೀ ಗೋಪಾಲ ಕೆ. (ಮಹಾಲಕ್ಷ್ಮಿ ಲೇಔಟ್)

ಅ) ಬಿಜಾಪುರದಲ್ಲಿ ಮಹಿಳಾ ವಿಶ್ವವಿದ್ಯಾಲಯವನ್ನು ಯಾವಾಗ ಪ್ರಾರಂಭಿಸಲಾಯಿತು.

ಆ) ಈ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರತಕ್ಕ ಕಾಲೇಜುಗಳ ಸಂಖ್ಯೆ ಎಷ್ಟು;

ಇ) ದಕ್ಷಿಣ ಕರ್ನಾಟಕ ಭಾಗದಲ್ಲಿ ಮಹಿಳಾ ವಿಶ್ವವಿದ್ಯಾಲಯ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ದಕ್ಷಿಣ ಕರ್ನಾಟಕ ಭಾಗಗಳಲ್ಲಿನ ಸರ್ಕಾರಿ ಹಾಗೂ ಖಾಸಗೀ ಮಹಿಳಾ ಕಾಲೇಜುಗಳಿಗಾಗಿ ಹೊಸದಾಗಿ ಶಿವಮೊಗ್ಗ, ಬೆಂಗಳೂರು ಅಥವಾ ಹಾಸನದಲ್ಲಿ ಮಹಿಳಾ ವಿಶ್ವವಿದ್ಯಾಲಯವನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಬಿಜಾಪುರದಲ್ಲಿ ಮಹಿಳಾ ವಿಶ್ವವಿದ್ಯಾಲಯವನ್ನು ದಿನಾಂಕ: 21–6–2003 ರಿಂದ ಪ್ರಾರಂಭಿಸಲಾಯಿತು.

ಆ) ಈ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರತಕ್ಕ ಕಾಲೇಜುಗಳ ಸಂಖ್ಯೆ: 93.

ಇ) ಹೌದು

ಈ) 2013–14ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯದ ವ್ಯಾಪ್ತಿಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ವಿಸ್ತರಿಸುವ ನಿಟ್ಟಿನಲ್ಲಿ ಮಂಡ್ಯದಲ್ಲಿ ಒಂದು ಹೊರಾವರಣ ಕೇಂದ್ರವನ್ನು ಸ್ಥಾಪಿಸಲು ಸರ್ಕಾರವು ಘೋಷಿಸಿದೆ. ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯದ ವ್ಯಾಪ್ತಿಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ವಿಸ್ತರಿಸಲು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ಕ್ಕೆ ತಿದ್ದುಪಡಿಯನ್ನು ತರಲಾಗುತ್ತಿದೆ.

ಪುಸ್ತಕ ಮಾರಾಟ ಮಳಿಗೆಗಳ ಸ್ಥಾಪನೆ

2567(1081); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮಿ ಲೇಔಟ್)

ಅ) ಕನ್ನಡ ಪುಸ್ತಕ ಪ್ರಾಧಿಕಾರವು ರಾಜ್ಯದಲ್ಲಿ ಪುಸ್ತಕ ಮಾರಾಟ ಮಳಿಗೆಗಳನ್ನು ಪ್ರಾರಂಭಿಸಿದೆಯೇ:

ಆ) ಹಾಗಿದ್ದಲ್ಲಿ, ಎಲ್ಲೆಲ್ಲಿ ಈ ಪುಸ್ತಕ ಮಾರಾಟ ಮಳಿಗೆಗಳು ಕಾರ್ಯ ನಿರ್ವಹಿಸುತ್ತಿವೆ;

ಇ) ಬೆಂಗಳೂರು ನಗರದಲ್ಲಿ ಎಲ್ಲೆಲ್ಲಿ ಈ ಮಾರಾಟ ಮಳಿಗೆಗಳಿವೆ;

ಈ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪುಸ್ತಕ ಮಾರಾಟ ಮಳಿಗೆಗಳನ್ನು ತೆರೆಯಲು ಸರ್ಕಾರ ಉದ್ದೇಶಿಸಿದೆಯೇ;

ಉ) ಹಾಗಿದ್ದಲ್ಲಿ, 2014–15ನೇ ಸಾಲಿನಲ್ಲಿ ಎಲ್ಲೆಲ್ಲಿ ಪ್ರಾರಂಭಿಸಲಾಗುವುದು?

ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಹೌದು.